ಕರ್ನಾಟಕ ಸರ್ಕಾರ
ಕರ್ನಾಟಕ ಪರೀಕ್ಷಾ ಪ್ರಾಧಿಕಾರ
ಬೆಂಗಳೂರು

ಸಂಖ್ಯೆ: ಇಡಿ/ಕೆಇಎ/ಆಡಳಿತ/ಸಿ.ಆರ್-04/2022 ದಿನಾಂಕ: 24-09-2022

**ಡಿಪ್ಲೊಮಾ ಧಾರಕರಿಗೆ 2022-23 ನೇ ಸಾಲಿನ ವೃತ್ತಿಪರ ಕೋರ್ಸುಗಳ ಪ್ರವೇಶಕ್ಕೆ ಡಿಪ್ಲೊಮ ಸಾಮಾನ್ಯ ಪ್ರವೇಶ ಪರೀಕ್ಷೆ**

ಸರ್ಕಾರವು ತನ್ನ ಪತ್ರ ಸಂಖ್ಯೆ ಇಡಿ 155 ಟಿಇಸಿ 2022 ಬೆಂಗಳೂರು ದಿನಾಂಕ 19-07-2022 ರಲ್ಲಿ, Applied Science ಮತ್ತು Applied Mathematics ವಿಷಯಗಳನ್ನು ಮಾತ್ರ ಪರಿಗಣಿಸಿ ಎಲ್ಲಾ ಪ್ರೋಗ್ರಾಂಗಳಿಗೆ ಅನ್ವಯಿಸುವಂತೆ ಒಂದು ಪ್ರಶ್ನೆ ಪತ್ರಿಕೆ ಆಧಾರದ ಮೇಲೆ ಡಿಪ್ಲೊಮ ಸಿಇಟಿ 2022 ಅನ್ನು ನಡೆಸಲು ಅನುಮೋದನೆ ನೀಡಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ಆದೇಶಿಸಿದೆ. ಮುಂದುವರಿದು ಸರ್ಕಾರದ ಆದೇಶ ಸಂಖ್ಯೆ ಇಡಿ 88 ಡಿಟಿಇ 2022 ಬೆಂಗಳೂರು ದಿನಾಂಕ 14-07-2022 ಅನ್ವಯ ಮೂರು ವರ್ಷಗಳ ಡಿಪ್ಲೊಮ ಇಂಜಿನಿಯರಿಂಗ್ ಕೋರ್ಸುಗಳಲ್ಲಿ ವ್ಯಾಸಂಗ ಮಾಡಿ ಅರ್ಹತೆಯನ್ನು ಪಡೆದಿರುವ ಅಭ್ಯರ್ಥಿಗಳು ಲ್ಯಾಟರಲ್ ಎಂಟ್ರಿ ಮೂಲಕ 2ನೇ ವರ್ಷದ ಅಥವಾ 3ನೇ ಸೆಮಿಸ್ಟರ್‌ನ ಇಂಜಿನಿಯರಿಂಗ್ ಕೋರ್ಸ್‌ಗಳಿಗೆ ನೇರವಾಗಿ ಯಾವುದೇ ಇಂಜಿನಿಯರಿಂಗ್ ಕೋರ್ಸ್‌ಗಳನ್ನು ಆಯ್ಕೆ ಮಾಡಿಕೊಳ್ಳಲು ಆದೇಶಿಸಿದೆ.

ಸರ್ಕಾರದ ಆದೇಶದ ಅನ್ವಯ 2022-23ನೇ ಸಾಲಿಗೆ ಪ್ರಾಧಿಕಾರವು ಹಗಲು ಇಂಜಿನಿಯರಿಂಗ್ ಕಾಲೇಜುಗಳ ಪ್ರವೇಶಾತಿಗೆ ಅರ್ಹ ಡಿಪ್ಲೊಮ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅಭ್ಯರ್ಥಿಗಳು, ಈ ಕೋರ್ಸ್‌ಗಳ ಪ್ರವೇಶಕ್ಕೆ ಅರ್ಹತೆ ಪಡೆಯಲು, ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ನಡೆಸುವ 2022ರ ಸಾಮಾನ್ಯ ಪ್ರವೇಶ ಪರೀಕ್ಷೆಗೆ ಹಾಜರಾಗಬೇಕು. ವಾಸ್ತುಶಿಲ್ಪ (Architecture) ಪ್ರವೇಶಕ್ಕೆ Council of Architecture ನವರು ನಡೆಸಿದ NATA ಪರೀಕ್ಷೆಗೆ ಹಾಜರಾಗಿ valid NATA score ಅನ್ನು ಹೊಂದಿರಬೇಕು ಮತ್ತು ಕಡ್ಡಾಯವಾಗಿ ಆನ್ ಲೈನ್ ಮೂಲಕ ನೊಂದಣಿ ಮಾಡಿ ಅರ್ಜಿ ಸಲ್ಲಿಸಿರಬೇಕು.

**ಶೈಕ್ಷಣಿಕ ವಿದ್ಯಾರ್ಹತೆ:** ಮೇಲಿನ ಎಲ್ಲಾ ಕೋರ್ಸ್‌ಗಳ ಪ್ರವೇಶಕ್ಕೆ ವಿವರವಾದ ಅರ್ಹತೆಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವೆಬ್ ಸೈಟ್ http://kea.kar.nic.in ನಲ್ಲಿ ಪ್ರಕಟಿಸಲಾಗಿದೆ. ಅಭ್ಯರ್ಥಿಗಳು, ಯಾವುದೇ ಕೋರ್ಸಿಗೆ ಅರ್ಜಿ ಸಲ್ಲಿಸುವ ಮೊದಲು ಅರ್ಹತಾ ವಿವರವನ್ನು ಪರಿಶೀಲಿಸಲು ಕೋರಲಾಗಿದೆ.

| | |
|---|---|
| ವೆಬ್‌ಸೈಟಿನಲ್ಲಿ ಡಿಸಿಇಟಿ-2022 ಮಾಹಿತಿ ಪುಸ್ತಕ ಪ್ರಕಟಣೆ | 27-09-2022 ಮಧ್ಯಾಹ್ನ 2.00 |
| ಆನ್‌ಲೈನ್ ಮುಖಾಂತರ ಅರ್ಜಿ ಭರ್ತಿ ಮಾಡಲು ಪ್ರಾರಂಭಿಕ ದಿನಾಂಕ | 27-09-2022 ಮಧ್ಯಾಹ್ನ 3.00 ರಿಂದ |
| ನೊಂದಣಿ ಹಾಗು ಶುಲ್ಕವನ್ನು ಪಾವತಿ ಮಾಡಲು | 07-10-2022 ಸಂಜೆ 5.30 ರ ವರೆಗೆ |
| ಆನ್‌ಲೈನ್ ಮುಖಾಂತರ ಅರ್ಜಿ ಭರ್ತಿ ಮಾಡಲು ಕೊನೆಯ ದಿನಾಂಕ | 07-10-2022 ರಾತ್ರಿ 11.59 ರ ವರೆಗೆ |
| ಪ್ರವೇಶ ಪತ್ರಗಳನ್ನು ಡೌನ್‌ಮಾಡಿಕೊಳ್ಳಲು | ನಂತರ ತಿಳಿಸಲಾಗುವುದು. |

**ಸೂಚನೆ:**

- ಅಭ್ಯರ್ಥಿಗಳು ಆನ್ ಲೈನ್ ಮೂಲಕ ಡಿಪ್ಲೊಮ ಸಿಇಟಿ-2022ಕ್ಕೆ ದಾಖಲಿಸಿದ ಎಲ್ಲಾ ಮಾಹಿತಿಗಳನ್ನು ಅಂತಿಮ ಎಂದು ಪರಿಗಣಿಸಲಾಗುತ್ತದೆ ಮತ್ತು ಈ ಮಾಹಿತಿಯೇ ಮುಂದಿನ ಎಲ್ಲಾ ಪ್ರಕ್ರಿಯೆಗಳಿಗೆ ಆಧಾರವಾಗಿರುತ್ತದೆ ಹಾಗೂ ಯಾವುದೇ ಕಾರಣಕ್ಕೂ ದಾಖಲಿಸಿದ ಮಾಹಿತಿಯನ್ನು ಬದಲಾಯಿಸಲು ಅವಕಾಶವಿರುವುದಿಲ್ಲ.
- ಡಿಪ್ಲೊಮಾ ಸಿಇಟಿ-2022 ರ ಅರ್ಜಿ ನಮೂನೆಯಲ್ಲಿ ಜಾತಿ / ವರ್ಗ ಮತ್ತು ವಾರ್ಷಿಕ ಆದಾಯದ ಬಗ್ಗೆ ಒದಗಿಸಿರುವ ಮಾಹಿತಿಯು ವಿದ್ಯಾರ್ಥಿಗಳಿಗೆ ರ್‍ಯಾಂಕ್ ನೀಡುವುದಕ್ಕೆ / ಸೀಟು ಆಯ್ಕೆ ಮಾಡುವುದಕ್ಕೆ ಪರಿಗಣಿಸಲಾಗುವುದು ಮತ್ತು ಯಾವುದೇ ಕಾರಣಕ್ಕೂ ಬದಲಾಯಿಸಲು ಅವಕಾಶವಿರುವುದಿಲ್ಲ.
- ಜಾತಿ / ವರ್ಗ, ಮತ್ತು ಕಲ್ಯಾಣ ಕರ್ನಾಟಕದ ಮೀಸಲಾತಿ ಕೋರಲು ಇಚ್ಚಿಸುವ ಅರ್ಹ ಅಭ್ಯರ್ಥಿಗಳು ತಮ್ಮ ಆನ್‌ಲೈನ್ ಅರ್ಜಿ ನಮೂನೆಯಲ್ಲಿ ತಪ್ಪದೆ RD ಸಂಖ್ಯೆಯನ್ನು ನಮೂದಿಸುವುದು.

**2022 ರ ಡಿಪ್ಲೊಮಾ ಸಾಮಾನ್ಯ ಪ್ರವೇಶ ಪರೀಕ್ಷೆಯ ವೇಳಾಪಟ್ಟಿ**

| ದಿನಾಂಕ | ವಾರ | ವಿಷಯ | ಸಮಯ | ಅಂಕಗಳು |
|---|---|---|---|---|
| ನಂತರ ತಿಳಿಸಲಾಗುವುದು | | ಎಲ್ಲಾ ಪ್ರೋಗ್ರಾಂಗಳಿಗೆ Applied Science ಮತ್ತು Applied Mathematics ಮಾತ್ರ | ಬೆ. 10.00 ರಿಂದ ಮ. 1.00 | 100 |
| | | ಕನ್ನಡ ಭಾಷಾ ಪರೀಕ್ಷೆ (ಬೆಂಗಳೂರಿನಲ್ಲಿ ಮಾತ್ರ) ಹೊರನಾಡು ಮತ್ತು ಗಡಿನಾಡು ಕನ್ನಡಿಗರಿಗೆ | ಮ. 3.00 ರಿಂದ ಸಂ 4.00 | 50 |

ವಿ.ಸೂ. ಹೆಚ್ಚಿನ ಮಾಹಿತಿಗಾಗಿ ಪ್ರಾಧಿಕಾರದ ವೆಬ್‌ಸೈಟ್ http://kea.kar.nic.in ಗೆ ಭೇಟಿ ನೀಡಲು ಸೂಚಿಸಿದೆ.

(ಎಸ್. ರಮ್ಯ ಭಾ.ಆ.ಸೇ.)
ಕಾರ್ಯನಿರ್ವಾಹಕ ನಿರ್ದೇಶಕರು